ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ಅನುದಾನಿತ ಶಾಲಾ ಕಾಲೇಜುಗಳ ಹುದ್ದೆ ಭರ್ತಿಗೆ ಆರ್ಥಿಕ ಇಲಾಖೆ ತಡೆಹಿಡಿದಿರುವ ಬಗ್ಗೆ

ಶ್ರೀ ಮರಿತಿಬ್ಬೇಗೌಡ(ಶಿಕ್ಷಕರ ಕ್ಷೇತ್ರ) -

319 (480) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಅನುದಾನಿತ ಶಾಲಾ ಕಾಲೇಜುಗಳಲ್ಲಿ 2015ನೇ ಸಾಲಿನವರೆಗೆ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಅನುಮತಿಯಂತೆ ಶಿಕ್ಷಣ ಇಲಾಖೆಯಿಂದ ಆರ್ಥಿಕ ಇಲಾಖೆಗೆ ಅನುಮೋದನೆಗಾಗಿ ಸಲ್ಲಿಕೆಯಾಗಿರುವ ಪ್ರಸ್ತಾವನೆಗಳ ಸಂಖ್ಯೆ ಎಷ್ಟು; (ಪ್ರಾಥಮಿಕ, ಪ್ರೌಢ, ಪದವಿಪೂರ್ವ, ಪದವಿ ಕಾಲೇಜುಗಳ ವಿವರ ನೀಡುವುದು)

(ಆ) ಸದರಿ ಕಡತಗಳಿಗೆ ಆರ್ಥಿಕ ಇಲಾಖೆ ಕೋವಿಡ್-19ರ ಆರ್ಥಿಕ ಮಿತವ್ಯಯದ ಅಡಿ ಅನುಮೋದನೆಗೆ ತಡೆಹಿಡಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಇದರಿಂದಾಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಅನುದಾನದ ನಿರೀಕ್ಷೆಯಲ್ಲಿರುವ ಬೋಧಕರಿಗೆ ಮತ್ತು ವಿದ್ಯಾರ್ಥಿಗಳ ಗುಣಮಟ್ಟದ ಶಿಕ್ಷಣಕ್ಕೆ ಅಡ್ಡಿ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ಸದರಿ ಮಿತವ್ಯಯವನ್ನು ಸಡಿಲಿಸಿ, ಶಿಕ್ಷಣ ಇಲಾಖೆಯಿಂದ ಬರುವ ಎಲ್ಲಾ ಪ್ರಸ್ತಾವನೆಗಳಿಗೂ ಯಾವ ಕಾಲಮಿತಿಯಲ್ಲಿ ಅನುಮೋದನೆ ನೀಡಲಾಗುವುದು?